# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 543 (692)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಜಲ ಸಂಪನ್ಮೂಲ ಸಚಿವರು

ವಿಷಯ : ವಾರಾಹಿ ಎಡದಂಡೆ ಕಾಲುವೆ ಯೋಜನೆಯ ಅನುಷ್ಠಾನದಲ್ಲಿ ವಿಳಂಬ ಕುರಿತು

(ಅ) 41 ವರ್ಷಗಳ ಹಿಂದೆ ಪ್ರಾರಂಭಗೊಂಡ ವಾರಾಹಿ ನೀರಾವರಿ ಯೋಜನೆಯ ಎಡದಂಡೆ ಕಾಲುವೆ ಮತ್ತು ಉಪಕಾಲುವೆಯು ಹಾದು ಹೋಗುವ ಗ್ರಾಮಗಳು ಯಾವುವು; ಅವುಗಳ ಒಟ್ಟು ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಅವುಗಳಲ್ಲಿ ಈಗ ನೀರಾವರಿ ಸೌಲಭ್ಯವನ್ನು ಪಡೆಯುತ್ತಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು; (ತಾಲ್ಲೂಕು, ಗ್ರಾಮವಾರು ವಿವರ ನೀಡುವುದು)

(ಆ) ವಾರಾಹಿ ಎಡದಂಡೆ ಕಾಲುವೆ ಮತ್ತು ಉಪಕಾಲುವೆಯು ಹಾದು ಹೋಗುವ ಮಾರ್ಗದಲ್ಲಿ ಭೂಸ್ವಾಧೀನತೆಗೆ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ವಿಳಾಸದೊಂದಿಗೆ ಮಾಹಿತಿ ನೀಡುವುದು) ಈ ಭೂ ಸ್ವಾಧೀನ ಪ್ರಕ್ರಿಯೆಗೆ ಅಗತ್ಯವಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಫಲಾನುಭವಿಗಳಿಗೆ ಹಂಚಿಕೆ ಮಾಡಲಾದ ಅನುದಾನವೆಷ್ಟು; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು; (ಗ್ರಾಮವಾರು ವಿವರ ನೀಡುವುದು)

(ಇ) ವಾರಾಹಿ ಎಡದಂಡೆ ಕಾಲುವೆ ಮತ್ತು ಉಪಕಾಲುವೆಗಳು ಹಾದು ಹೋಗುವ ಮಾರ್ಗದಲ್ಲಿ ಬರುವ ಸರ್ಕಾರಿ ಭೂಮಿಯ ವಿಸ್ತೀರ್ಣವೆಷ್ಟು; ಅವುಗಳಲ್ಲಿ ಭೂ ಸ್ವಾಧೀನತೆ ಪಡೆದುಕೊಳ್ಳಲು ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಗ್ರಾಮವಾರು ವಿವರ ನೀಡುವುದು)

(ಈ) ವಾರಾಹಿ ನೀರಾವರಿ ಎಡದಂಡೆ ಕಾಲುವೆಯನ್ನು ಪೂರ್ಣ ಅನುಷ್ಠಾನಗೊಳಿಸಲು ಅಗತ್ಯವಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಬಿಡುಗಡೆಗೆ

ಬಾಕಿಯಿರುವ ಅನುದಾನವೆಷ್ಟು; ಯೋಜನೆಯನ್ನು ಪೂರ್ಣಗೊಳಿಸಲು ಇಲಾಖೆಯ ಕಾಲಮಿತಿ ಯಾವುದು?